# ತುಮಕೂರು ವಿಶ್ವವಿದ್ಯಾನಿಲಯ

ತು.ವಿ:ಸಾ&ಅ:ಅ.ಉ:2018-19/1677 ದಿನಾಂಕ:31.07.2018

## ಅತಿಥಿ ಉಪನ್ಯಾಸಕರ ಅಧಿಸೂಚನೆ

ತುಮಕೂರು ಜಿಲ್ಲೆಯ ತಿಪಟೂರು ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿರುವ ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಾಣೀಜ್ಯಶಾಸ್ತ್ರ ಅಧ್ಯಯನ ಕೇಂದ್ರಕ್ಕೆ 2018–19ನೇ ಶೈಕ್ಷಣಿಕ ಸಾಲಿಗೆ ಸ್ನಾತಕೋತ್ತರ ವಾಣೀಜ್ಯಶಾಸ್ತ್ರ ಪದವಿ ತರಗತಿಗಳಿಗೆ ಬೋಧನೆ ಮಾಡಲು ಅತಿಥಿ ಉಪನ್ಯಾಸಕರನ್ನು ನೇಮಕ ಮಾಡುವ ಸಂಬಂಧ ಅರ್ಹ ಭಾರತೀಯ ಪ್ರಜೆಗಳಿಂದ ಆನ್‌ಲೈನ್ ಮುಖೇನ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

ಅತಿಥಿ ಉಪನ್ಯಾಸಕರ ಆಯ್ಕೆಗೆ ಸಂಬಂಧಿಸಿದಂತೆ, ಅಧಿಸೂಚನೆ ಮತ್ತು ಮಾನದಂಡಗಳನ್ನು ವಿಶ್ವವಿದ್ಯಾನಿಲಯದ ಜಾಲತಾಣ www.tumkuruniversity.ac.in ರಿಂದ ಡೌನ್‌ಲೋಡ್ ಮಾಡಿಕೊಳ್ಳತಕ್ಕದ್ದು. ಅಭ್ಯರ್ಥಿಗಳು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಆನ್ಲೈನ್ ಮೂಲಕ ದಿನಾಂಕ: 05.08.2018ರ ಸಂಜೆ 05.00ಗಂಟೆಯೊಳಗೆ ಅರ್ಜಿಯನ್ನು ಸಲ್ಲಿಸತಕ್ಕದ್ದು. ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಚುರಪಡಿಸಲಾಗುವುದು ಹಾಗೂ ಅಭ್ಯರ್ಥಿಗಳು ದಿನಾಂಕ:06.08.2018ರಂದು ಸಂಜೆ:03.00 ಗಂಟೆಗೆ ಮೂಲ ದಾಖಲಾತಿ ಪರಿಶೀಲನೆ ಹಾಗೂ ಸಂದರ್ಶನಕ್ಕೆ ಹಾಜರಾಗತಕ್ಕದ್ದು. ಸಂದರ್ಶನಕ್ಕೆ ಸಂಬಂಧಿಸಿದಂತೆ, ಅಭ್ಯರ್ಥಿಗಳು ವಿಶ್ವವಿದ್ಯಾನಿಲಯದ ಜಾಲತಾಣವನ್ನು ನಿರಂತರವಾಗಿ ವೀಕ್ಷಿಸುವುದು. ಸಂದರ್ಶನದ ಬಗ್ಗೆ ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ತಿಳಿಸಲಾಗುವುದಿಲ್ಲ. ಆಯ್ಕೆಗೆ ಸಂಬಂಧಿಸಿದಂತೆ, ಸರ್ಕಾರದ ನಿಯಮಾವಳಿಗಳನ್ನು ಪಾಲಿಸಲಾಗುವುದು. ಈ ಹಿಂದೆ ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸಿರುವ ಅಭ್ಯರ್ಥಿಗಳು ಹಾಗೂ ದಿನಾಂಕ:07.06.2018ರ ವಿಶ್ವವಿದ್ಯಾನಿಲಯದ ಅಧಿಸೂಚನೆಯ ಅನ್ವಯ ಅರ್ಜಿ ಸಲ್ಲಿಸಿದ್ದ ಅಭ್ಯರ್ಥಿಗಳು ಸಹ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸತಕ್ಕದ್ದು.

31/7/18

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು